ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRA

ಪತ್ರಿಕಾ ತುಣುಕುಗಳು
PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1/

marketing@metarolls.com, info@threadedrebars.com

### ಜೆಡಿಎಸ್ ಎಂಎಲ್‌ಎಗೆ 10 ಕೋಟಿ ನೀಡಲು ಮುಂದಾದ ಪ್ರಕರಣ

# ಆಪರೇಷನ್ ಕಮಲ ಆಮಿಷ ಬಿಎಸ್‌ವೈ ತನಿಖೆಗೆ ಆದೇಶ

1/4/21

■ **ವಿಕ ಸುದ್ದಿಲೋಕ** ಬೆಂಗಳೂರು

ಸಚಿವ ಈಶ್ವರಪ್ಪ ಬಂಡಾಯ ಎದ್ದಿರುವುದರ ನಡುವೆಯೇ ಸಿಎಂ ಯಡಿಯೂರಪ್ಪ ಅವರಿಗೆ ಆಪರೇಷನ್ ಕಮಲ ಪ್ರಕರಣದ ಆತಂಕವೂ ಎದುರಾಗಿದೆ. ಯಾದಗಿರಿ ಜಿಲ್ಲೆಯ ಗುರುಮಿಠಕಲ್ ವಿಧಾನಸಭೆ ಕ್ಷೇತ್ರದ ಜೆಡಿಎಸ್ ಶಾಸಕ ನಾಗನಗೌಡ ಕಂದಕೂರ್‌ಗೆ ಬಿಜೆಪಿ ಸೇರಲು 10 ಕೋಟಿ ರೂ. ಆಮಿಷವೊಡ್ಡಿದ ಪ್ರಕರಣ ಸಂಬಂಧ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದ ದೂರಿನ ತನಿಖೆಗೆ ಹೈಕೋರ್ಟ್ ಆದೇಶ ನೀಡಿದೆ.

ಪ್ರಕರಣ ಸಂಬಂಧ ದೇವದುರ್ಗ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಎಫ್‌ಐಆರ್ ಮತ್ತು ಮುಂದಿನ ವಿಚಾರಣೆಗೆ ನೀಡಿದ್ದ ತಡೆಯಾಜ್ಞೆ ತೆರವು ಕೋರಿ ಮೂಲ ದೂರುದಾರರಾದ ಜೆಡಿಎಸ್ ಶಾಸಕ ಶರಣಗೌಡ ಸಲ್ಲಿಸಿದ್ದ ಮಧ್ಯಂತರ ಅರ್ಜಿಯನ್ನು ನ್ಯಾ. ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕಸದಸ್ಯ ಪೀಠ ಮಾನ್ಯ ಮಾಡಿದೆ.

ಎಫ್‌ಐಆರ್‌ಗೆ ಈ ಹಿಂದೆ ನೀಡಿದ್ದ ತಡೆಯಾಜ್ಞೆ ತೆರವುಗೊಳಿಸಿದ್ದಲ್ಲದೆ, ತನಿಖೆ ಮುಂದುವರಿಸಲು ದೇವದುರ್ಗ ಠಾಣಾ ಪೊಲೀಸರಿಗೆ ಹೈಕೋರ್ಟ್ ನಿರ್ದೇಶನ ನೀಡಿತು.



### ಯಾರ್‍ಯಾರ ಮೇಲೆ ಕೇಸ್?

ದೂರಿನ ಹಿನ್ನೆಲೆಯಲ್ಲಿ ಪೊಲೀಸರು ಭಾರತೀಯ ದಂಡ ಸಂಹಿತೆ ಮತ್ತು ಭ್ರಷ್ಟಾಚಾರ ನಿಗ್ರಹ ಕಾಯಿದೆ ಅಡಿಯಲ್ಲಿ ಯಡಿಯೂರಪ್ಪ, ಬಿಜೆಪಿ ಶಾಸಕರಾದ ಶಿವನಗೌಡ ನಾಯಕ್, ಪ್ರೀತಮ್ ಗೌಡ ಹಾಗೂ ಸಿಎಂ ಅವರ ರಾಜಕೀಯ ಕಾರ್ಯದರ್ಶಿಯಾಗಿದ್ದ ಎಂ.ಬಿ. ಮರಮಕಲ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಎಫ್‌ಐಆರ್ ರದ್ದು ಕೋರಿ ಬಿಎಸ್‌ವೈ ಹಾಗೂ ಇತರೆ ಆರೋಪಿಗಳು 2019ರ ಫೆ.19ರಂದು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

### ಪ್ರಕರಣದ ಹಿನ್ನೆಲೆ ಏನು?

''ದೇವದುರ್ಗ ಕ್ಷೇತ್ರದ ಬಿಜೆಪಿ ಶಾಸಕ ಶಿವನಗೌಡ ನಾಯಕ್ 2019ರ ಫೆ.7ರಂದು ರಾತ್ರಿ ನನ್ನನ್ನು ಕಾರಿನಲ್ಲಿ ಕರೆದುಕೊಂಡು ಹೋಗಿ ಬಿ.ಎಸ್.ಯಡಿಯೂರಪ್ಪ, ಹಾಸನ ಶಾಸಕ ಪ್ರೀತಂ ಗೌಡ ಮತ್ತು ಮಾಜಿ ಪತ್ರಕರ್ತ ಎಂ.ಬಿ.ಮರಮಕಲ್ ಅವರನ್ನು ಭೇಟಿ ಮಾಡಿಸಿದರು. ಗುರುಮಿಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಲು ನಿಮ್ಮ ತಂದೆ ನಾಗನಗೌಡ ಕಂದಕೂರ್‌ರನ್ನು ಒಪ್ಪಿಸು. ನಿನ್ನನ್ನು ಆ ಕ್ಷೇತ್ರದ ಶಾಸಕರನ್ನಾಗಿ ಮಾಡುತ್ತೇವೆ. ಚುನಾವಣಾ ಖರ್ಚು ವೆಚ್ಚ ನಾವೇ ನೋಡಿಕೊಳ್ಳುತ್ತೇವೆ. ಜತೆಗೆ ಮುಂಗಡವಾಗಿ 10 ಕೋಟಿ ರೂ. ನೀಡುತ್ತೇವೆಂದು ಆಮಿಷವೊಡ್ಡಿದರು. ಅದಕ್ಕೆ ಒಪ್ಪದಿದ್ದರೆ ತಂದೆಯ ರಾಜಕೀಯ ಜೀವನ ಮುಗಿಸುವುದಾಗಿ ಬೆದರಿಕೆ ಹಾಕಿದರು,'' ಎಂದು ಆರೋಪಿಸಿ ಶರಣಗೌಡ ಫೆ.13ರಂದು ದೇವದುರ್ಗ ಠಾಣೆಗೆ ದೂರು ನೀಡಿದ್ದರು.

ವಿವರ»03

ಇದರಿಂದಾಗಿ ಪ್ರಕರಣದ ತನಿಖೆಗೆ ಅಡ್ಡಿ ನಿವಾರಣೆಯಾದಂತಾಗಿದೆ. ಈಗಾಗಲೇ ಡಿನೋಟಿಫಿಕೇಷನ್ ಪ್ರಕರಣದಲ್ಲಿ ಸಂಕಷ್ಟ ಎದುರಿಸುತ್ತಿರುವ ಸಿಎಂಗೆ ಮತ್ತೊಂದು ಹಿನ್ನಡೆಯಾಗಿದೆ.

### ಸುಪ್ರೀಂ ಮೊರೆ

ಹೈಕೋರ್ಟ್‌ನ ಏಕಸದಸ್ಯ ಪೀಠ ತನಿಖೆ ಮುಂದುವರಿಕೆಗೆ ನೀಡಿರುವ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲಾಗುವುದು. ಆ ಪ್ರಕ್ರಿಯೆಗೆ ಈಗಾಗಲೇ ಚಾಲನೆ ದೊರೆತಿದೆ ಎಂದು ಮುಖ್ಯಮಂತ್ರಿಗಳ ಕಾರ್ಯಾಲಯ ತಿಳಿಸಿದೆ.

6

# ಆಪರೇಷನ್ ಕಮಲ ಪ್ರಕರಣ ಮುನ್ನೆಲೆಗೆ

■ **ವಿಕ ಸುದ್ದಿಲೋಕ** ಕಲಬುರಗಿ 1/4/21

ಗುರುಮಠಕಲ್ ಜೆಡಿಎಸ್ ಶಾಸಕ ನಾಗನಗೌಡ ಕಂದಕೂರ ಅವರನ್ನು ಬಿಜೆಪಿಗೆ ಸೆಳೆಯಲು ಅವರ ಪುತ್ರ ಶರಣಗೌಡ ಕಂದಕೂರ ಅವರಿಗೆ ಬಿಜೆಪಿ ಸೇರಲು ಆಮಿಷವೊಡ್ಡಲಾಗಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ದೇವದುರ್ಗ ಶಾಸಕ ಕೆ.ಶಿವನಗೌಡ ನಾಯಕ್, ಹಾಸನ ಶಾಸಕ ಪ್ರೀತಂಗೌಡ, ಎಂ.ಬಿ.ಮರಮಕಲ್ ಆಮಿಷವೊಡ್ಡಿದ್ದರು ಎಂದು ಶಾಸಕ ಕಂದಕೂರ ಪುತ್ರ ಶರಣಗೌಡ ದೇವದುರ್ಗ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಈ 'ಆಪರೇಷನ್ ಕಮಲ' ಆಡಿಯೊ ಪ್ರಕರಣ ಬಹಿರಂಗವಾದ ಬಳಿಕ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ ಮಾಡಿದ ಮೇಲೆ ಬಿ.ಎಸ್.ಯಡಿಯೂರಪ್ಪ ಅವರು, ಗುರುಮಠಕಲ್ ಕ್ಷೇತ್ರಕ್ಕೆ ಎಚ್.ಡಿ. ಕುಮಾರಸ್ವಾಮಿ ಅವರು ನೀಡಿದ್ದ ಕೋಟ್ಯಂತರ ರೂ. ಅನುದಾನವನ್ನು ವಾಪಸ್ ಪಡೆದುಕೊಂಡಿದ್ದರು.

ಇದರಿಂದಾಗಿ ಆಕ್ರೋಶಗೊಂಡ ದಳಪತಿಗಳು ಯಡಿಯೂರಪ್ಪ ಅವರು ಯಾದಗಿರಿ ಜಿಲ್ಲೆಗೆ ಆಗಮಿಸಿದ್ದ ವೇಳೆ ಧಿಕ್ಕಾರ ಕೂಗಿದ್ದರು. ಇದಾದ ಮೇಲೆ ಜೆಡಿಎಸ್ ಕಾರ್ಯಕರ್ತರ ವಿರುದ್ಧ ನಗರ ಠಾಣೆಯಲ್ಲಿ ಕೇಸ್ ದಾಖಲಿಸಲಾಗಿತ್ತು. ಇದನ್ನು ಖಂಡಿಸಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಆಗಮಿಸಿ ಧರಣಿ ನಡೆಸಿರುವುದನ್ನು ಸ್ಮರಿಸಬಹುದು.

**ಆಪರೇಷನ್ ಕಮಲ ಆಡಿಯೊ ಪ್ರಕರಣ ವಿರುದ್ಧ ತನಿಖೆಗೆ ದಾಖಲಾಗಿದ್ದ ಎಫ್ಐಆರ್‌ಗೆ ನೀಡಿದ್ದ ತಡೆಯಾಜ್ಞೆಯನ್ನು ಹೈಕೋರ್ಟ್ ತೆರವುಗೊಳಿಸಿದೆ. ಶೀಘ್ರವೇ ವಿಚಾರಣೆ ನಡೆಯಲಿದೆ.**

**-ಶರಣಗೌಡ ಕಂದಕೂರ**
ಜೆಡಿಎಸ್ ಯುವ ಮುಖಂಡ